# ಹಿರಿಯ ಕಲಾವಿದ ದ್ವಾರಕೀಶ್ ನಿಧನಕ್ಕೆ ನಾಡೋಜ ಡಾ.ಮಹೇಶ ಜೋಶಿ ತೀವ್ರ ಸಂತಾಪ

**ಬೆಂಗಳೂರು**: ಕನ್ನಡ ಚಿತ್ರರಂಗ ಕಂಡ ಮಹಾನ್ ಪ್ರತಿಭೆಗಳಲ್ಲಿ ಒಬ್ಬರಾದ ದ್ವಾರಕೀಶ್ ಅವರ ನಿಧನಕ್ಕೆ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ.ಮಹೇಶ ಜೋಶಿ ತೀವ್ರ ಸಂತಾಪವನ್ನು ಸೂಚಿಸಿದ್ದಾರೆ. ಕನ್ನಡ ಚಿತ್ರರಂಗವನ್ನು ಅನೇಕ ವಿಶೇಷ ಎತ್ತರಗಳಿಗೆ ಕರೆದು ಕೊಂಡು ಹೋದಂತಹ ಅವರ ಕನ್ನಡಾಭಿಮಾನ ಎಲ್ಲರಿಗೂ ಮಾದರಿಯಾಗಿರುವಂತಹದು. ತಾವು ದೂರದರ್ಶನದ ಮೂಲಕ ರೂಪಿಸಿದ 'ಮಧುರ ಮಧುರವೀ ಮಂಜುಳಗಾನ' ಕಾರ್ಯಕ್ರಮದಲ್ಲಿ ದ್ವಾರಕೀಶ್ ವಿಶೇಷವನ್ನೂ ರೂಪಿಸಲಾಗಿತ್ತು ಅತ್ಯಂತ ಜನಪ್ರಿಯವಾದ ಈ ಕಾರ್ಯಕ್ರಮದಲ್ಲಿ ಅವರು ಸಕ್ರಿಯವಾಗಿ ಭಾಗವಹಿಸಿ ಹಲವು ಮಹತ್ವದ ಸಂಗತಿಗಳನ್ನು ಹಂಚಿ ಕೊಂಡಿದ್ದರು . ಅವರ ಜೊತೆಗೆ ತಮಗೆ ವಿಶೇಷ ಒಡನಾಟವಿತ್ತು ಎಂದು ನಾಡೋಜ ಡಾ.ಮಹೇಶ ಜೋಶಿಯವರು ನೆನಪು ಮಾಡಿ ಕೊಂಡಿದ್ದಾರೆ. ವಿದೇಶದಲ್ಲಿ ಚಿತ್ರೀಕರಣ ನಡೆಸಿ ಕನ್ನಡದ ಹಿರಿಮೆಯನ್ನು ಮುಗಿಲಿನೆತ್ತರಕ್ಕೆ ಏರಿಸಿದ್ದ ದ್ವಾರಕೀಶ್ ಕನ್ನಡ ಸಾಹಿತ್ಯ ಪರಿಷತ್ತಿನ ಜೊತೆಗೆ ಕೂಡ ನಿಕಟ ಒಡನಾಟ ಇಟ್ಟು ಕೊಂಡಿದ್ದರು. ಎಲ್ಲೇ ಹೋದರೂ ಕನ್ನಡವನ್ನು ಉಳಿಸ ಬೇಕೆಂಬ ಅವರ ಕನ್ನಡದ ಪ್ರೀತಿ ಎಲ್ಲರಿಗೂ ಮಾದರಿ ಎಂದು ನಾಡೋಜ ಡಾ.ಮಹೇಶ ಜೋಶಿ ತಿಳಿಸಿದ್ದಾರೆ.

1942ರ ಆಗಸ್ಟ್ 19ರಂದು ಹುಣಸೂರಿನಲ್ಲಿ ಜನಿಸಿದ ದ್ವಾರಕೀಶ್ ಮೈಸೂರಿನಲ್ಲಿ ಬನುಮಯ್ಯ ಶಾಲೆ, ಶಾರದಾ ವಿಲಾಸ್ ಶಾಲೆ, ಸಿಪಿಸಿ ಪಾಲಿಟೆಕ್ನಿಕ್ ಮುಂತಾದೆಡೆಗಳಲ್ಲಿ ವಿದ್ಯಾಭ್ಯಾಸ ನಡೆಸಿದ್ದರು. ಹಿರಿಯರು ಮೈಸೂರಿನ ಗಾಂಧೀ ಚೌಕದಲ್ಲಿ ಅವರಿಗೆ ಭಾರತ್ ಆಟೋ ಸ್ಪೇರ್ಸ್ ಎಂಬ ಅಂಗಡಿ ಹಾಕಿಕೊಟ್ಟಿದ್ದರು. ಆದರೆ ದ್ವಾರಕೀಶ್ ಅವರಿಗೆ ಸಿನಿಮ ಖಯಾಲಿ ಹೋಗಲಿಲ್ಲ. ಅವರ ಸೋದರಮಾವ ಹುಣಸೂರು ಕೃಷ್ಣಮೂರ್ತಿ ಅವರಿಗೆ ದುಂಬಾಲು ಬಿದ್ದಿದ್ದರು. ಹುಣಸೂರು ಕೃಷ್ಣಮೂರ್ತಿ ಮೊದಲು ಡಿಪ್ಲೊಮಾ ಓದು ಮುಗಿಸು ಆಮೇಲೆ ಸಿನಿಮಾ ಮಾತು ಎಂದರು. ಮುಂದೆ ಅವರು ಸಿ.ವಿ. ಶಂಕರ್ ನಿರ್ದೇಶನದಲ್ಲಿ 'ವೀರಸಂಕಲ್ಪ'ದಲ್ಲಿ ದ್ವಾರಕೀಶ್ ಅವರಿಗೆ ಮೊದಲ ಅವಕಾಶ ಒಲಿಯುವಂತೆ ಮಾಡಿದರು. 'ವೀರಸಂಕಲ್ಪ' ಅನುಭವದ ಬಗ್ಗೆ ದ್ವಾರಕೀಶ್ 'ಮಧುರ ಮಧುರವೀ ಮಂಜುಳ ಗಾನ'ದಲ್ಲಿ 'ನಾನು ಎದುರಿಸಿದ ಮೊದಲ ಶಾಟ್ ಸಿಂಹಾಸನ ಹತ್ತುವುದಾಗಿತ್ತು . ಆ ಶಾಟ್ ಮುಗಿದ ತಕ್ಷಣ ಮೇಲೆ ಕುಳಿತಿದ್ದ ಕ್ಯಾಮರಾಮನ್ ನಿರ್ದೇಶಕರಿಗೆ ಹೇಳಿದರಂತೆ, "ಸಾರ್ ಬೇಕಿದ್ರೆ ಈಗ್ಲೇ ಸಿಂಹಾಸನ ಇಳಿಯೋದು ಕೂಡಾ ಶಾಟ್ ತೆಗೆದುಬಿಡೋಣ, ಎರಡೂ ಕೆಲಸ ಒಟ್ಟಿಗೆ ಆಗಿಬಿಡುತ್ತೆ" ಈ ಮಾತನ್ನು ನೆನಪು ಮಾಡಿ ಕೊಂಡು ತನ್ನ ಚಿತ್ರ ಜೀವನವಿಡೀ ಈ ಹಾವು ಏಣಿ ಆಟವೇ ಆಗಿತ್ತು ಎಂದು ಅರ್ಥಪೂರ್ಣವಾಗಿ ಹೇಳಿದ್ದರು ಎಂದು ನಾಡೋಜ ಡಾ.ಮಹೇಶ ಜೋಶಿಯವರು ನೆನಪು ಮಾಡಿ ಕೊಂಡಿದ್ದಾರೆ.

'ವೀರ ಸಂಕಲ್ಪ', 'ಸತ್ಯ ಹರಿಶ್ಚಂದ್ರ', 'ಪರೋಪಕಾರಿ', 'ಕ್ರಾಂತಿ ವೀರ', 'ಮೇಯರ್ ಮುತ್ತಣ್ಣ', 'ದೂರದ ಬೆಟ್ಟ', 'ಗಾಂಧೀನಗರ', 'ಬಾಳು ಬೆಳಗಿತು', 'ಬಂಗಾರದ ಮನುಷ್ಯ', 'ಬಹದ್ದೂರ್ ಗಂಡು' ಹೀಗೆ ನೀವು ಅಂದಿನ ಬಹಳಷ್ಟು ಚಿತ್ರಗಳಲ್ಲಿ ರಾಜ್ ಕುಮಾರ್ - ದ್ವಾರಕೀಶ್ ಜೋಡಿಯನ್ನು ಮೆಚ್ಚುಗೆಯಿಂದ

ಕಾಣಬಹುದಿತ್ತು. ಚಿತ್ರರಂಗಕ್ಕೆ ಬಂದ ಮೂರುನಾಲ್ಕು ವರ್ಷಗಳಲ್ಲೇ ಸಿನಿಮಾ ನಿರ್ಮಾಣಕ್ಕೂ ದ್ವಾರಕೀಶ್ ಕೈ ಹಾಕಿದರು. 'ಮೇಯರ್ ಮುತ್ತಣ್ಣ' ಚಿತ್ರದ ಅವರ ನಿರ್ಮಾಣ 'ಸಿದ್ದಲಿಂಗಯ್ಯ' ಅಂತಹ ಶ್ರೇಷ್ಠ ಚಿತ್ರ ನಿರ್ದೇಶಕನನ್ನು ಕನ್ನಡ ಚಿತ್ರರಂಗಕ್ಕೆ ಪರಿಚಯಿಸಿತು. ಅದಕ್ಕೂ ಮುಂಚೆ ದ್ವಾರಕೀಶ್ ಹಲವರೊಂದಿಗೆ ಕೂಡಿ 'ಮಮತೆಯ ಬಂಧನ' ಎಂಬ ಚಿತ್ರ ಕೂಡಾ ನಿರ್ಮಿಸಿದ್ದರು. ಮುಂದೆ ದ್ವಾರಕೀಶ್ 'ಕುಳ್ಳ ಏಜೆಂಟ್ ಜೀರೋ ಜೀರೋ ಜೀರೋ'ದಂತಹ ಚಿತ್ರ ನಿರ್ಮಿಸಿ ತಾವೇ ಹೀರೋ ಕೂಡಾ ಆದರು. ಅಂದು ಆ ಚಿತ್ರ ಎಷ್ಟರ ಮಟ್ಟಿಗೆ ಯಶಸ್ವಿಯಾಯಿತೆಂದರೆ, ತೆಲುಗು, ತಮಿಳು, ಮಲಯಾಳ, ಮರಾಠಿ ಭಾಷೆಗಳಲ್ಲಿ ಕೂಡಾ ನಿರ್ಮಾಣವಾಗಿ ದ್ವಾರಕೀಶ್ ಪ್ರಚಂಡ ಯಶಸ್ಸು ಗಳಿಸಿದ್ದರು ಎಂದು ನಾಡೋಜ ಡಾ.ಮಹೇಶ ಜೋಶಿ ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

ದ್ವಾರಕೀಶ್ ಚಿತ್ರ ನಿರ್ಮಾಪಕನಾಗಿ ಮಾಡಿದ ಕೆಲಸಗಳು ಮಹತ್ವ ಪೂರ್ಣವಾದವು. ಅವರು ನಿರ್ಮಾಪಕರಾಗಿ ಸುಮಾರು ಅರವತ್ತು ಚಿತ್ರಗಳನ್ನು ನಿರ್ಮಿಸಿದ್ದು ಅವುಗಳಲ್ಲಿ 'ಮೇಯರ್ ಮುತ್ತಣ್ಣ', 'ಕುಳ್ಳ ಏಜೆಂಟ್ ೦೦೦', 'ಭಾಗ್ಯವಂತರು', 'ಕಳ್ಳ ಕುಳ್ಳ', 'ಮನೆ ಮನೆ ಕಥೆ', 'ಇಂದಿನ ರಾಮಾಯಣ', 'ಕಿಟ್ಟು ಪುಟ್ಟು', 'ಸಿಂಗಾಪೂರಿನಲ್ಲಿ ರಾಜಾ ಕುಳ್ಳ', 'ಗುರು ಶಿಷ್ಯರು', 'ಆಪ್ತಮಿತ್ರ', 'ಆನಂದ ಭೈರವಿ' ಕಂಡ ಯಶಸ್ಸು ಅವು ಹೊಂದಿದ್ದ ಮನರಂಜನಾತ್ಮಕ ಅಂಶಗಳು, ತಾಂತ್ರಿಕತೆ, ಉತ್ತಮ ಹಾಡುಗಳು ಇವೆಲ್ಲವೂ ಮರೆಯುವಂತದ್ದಲ್ಲ. ಅವರೇ ನಿರ್ದೇಶಿಸಿದ 'ನೀ ಬರೆದ ಕಾದಂಬರಿ', 'ರಾಯರು ಬಂದರು ಮಾವನ ಮನೆಗೆ' ಮುಂತಾದ ಚಿತ್ರಗಳು ಕೂಡಾ ಮೈಲುಗಲ್ಲಾಗಿದ್ದವು ಎಂದು ನಾಡೋಜ ಡಾ.ಮಹೇಶ ಜೋಶಿ ಸ್ಮರಿಸಿದ್ದಾರೆ.

ದ್ವಾರಕೀಶ್ ಅಂತಹ ಸಾಧಕರ ಹೆಸರು ಉಳಿಯುವಂತೆ ಸರ್ಕಾರ ಮತ್ತು ಚಿತ್ರರಂಗ ವಿಶೇಷ ಯೋಜನೆಗಳನ್ನು ಹಮ್ಮಿ ಕೊಳ್ಳಬೇಕು ಎಂದಿರುವ ನಾಡೋಜ ಡಾ.ಮಹೇಶ ಜೋಶಿಯವರು ಈ ಅಗಲುವಿಕೆಯನ್ನು ಸಹಿಸಿ ಕೊಳ್ಳುವ ಶಕ್ತಿ ಅವರ ಕುಟುಂಬದವರಿಗೆ ಬರಲಿ ಎಂದು ಆಶಿಸಿದ್ದಾರೆ.

**ಎನ್.ಎಸ್.ಶ್ರೀಧರ ಮೂರ್ತಿ**

ಸಂಚಾಲಕರು, ಪ್ರಕಟಣಾ ವಿಭಾಗ, ಕನ್ನಡ ಸಾಹಿತ್ಯ ಪರಿಷತ್ತು